ಪಿ.ಡಬ್ಲೂ: 1

ದಿನಾಂಕಃ **27-11-2021** ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

ಪಾಟೀಸವಾಲು ಪ್ರತಿವಾದಿ **8** ನೇ ರವರ ಪರ ಶ್ರೀ ಇ. ಬಿ. ಆರ್ ವಕೀಲರಿಂದಃ

ವಿಭಾಗಕೋರಿ ಈ ದಾವೆಯನ್ನು ಹೂಡಿರುತ್ತೇವೆ. ವಾದಪತ್ರದಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತು. ಈ ನ್ಯಾಯಾಲಯದಲ್ಲಿ ಯಾವ ಯಾವ ದಾಖಲಾತಿಗಳನ್ನು ಹಾಜರುಪಡಿಸಿರುತ್ತೇನೆ ಎಂದು ತಿಳಿದುಕೊಂಡಿರುತ್ತೇನೆ. ನಾನು ದಾವಾ ಸ್ವತ್ತುಗಳು ಪಿತ್ರಾರ್ಜಿತ ಆಸ್ತಿಗಳೆಂದು ತೋರಿಸಲು ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನನ್ನ ಮದುವೆಯಾಗಿ **35** ವರ್ಷಗಳಾಗಿರುತ್ತದೆ. ನನ್ನ ಮದುವೆಯಾದ ನಂತರ ನಾನು ನನ್ನ ಗಂಡನ ಮನೆಯಲ್ಲಿ ವಾಸವಿದ್ದೇನೆ ಎಂದರೆ ಸರಿ. ನಾನು ನನ್ನ ಮದುವೆಯಾದ ನಂತರ ಪ್ರತಿವಾದಿಗಳು ಮಾತ್ರ ದಾವಾ ಸ್ವತ್ತಿನ ಸ್ವಾಧೀನದಲ್ಲಿರುತ್ತಾರೆ ಎಂದರೆ ಸರಿ. ಸರ್ವೆ ನಂಃ **43** ಕ್ಷೇತ್ರ **2-18** ಗುಂಟೆ ಜಮೀನಿಗೆ ಸಂಬಂಧಿಸಿದಂತೆ ಯಾವ ಯಾವ ದಾಖಲೆಗಳನ್ನು ಹಾಜರುಪಡಿಸದ್ದೀರಿ ಎಂದರೆ ಸಾಕ್ಷಿಯು ಈಗಾಗಲೇ ಅವುಗಳನ್ನು ಹಾಜರುಪಡಿಸಿರುತ್ತೇನೆ ಎಂದು ನುಡಿಯುತ್ತಾರೆ. **1** ನೇ ಪ್ರತಿವಾದಿ ದಿಃ **09-04-1953** ರಂದು ಕ್ರಯಕ್ಕೆ ಪಡೆದಿರುವ ಸ್ವತ್ತು ಎಂದರೆ ಸರಿಯಲ್ಲ.

ಈ ಹಂತದಲ್ಲಿ ಮುಂದುವರೆದ ಪಾಟೀಸವಾಲಿಗೆ ಕಾಲಾವಕಾಶ ಕೋರಿದ್ದು, ಕೋರಿಕೆ ಮೇರೆಗೆ ಮುಂದೂಡಲಾಯಿತು.

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ.ಸರಿ ಇದೆ.

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.
ನ್ಯಾಯಾಧೀಶರು, ಹುಣಸೂರು.